# ಕರ್ನಾಟಕ ಸರ್ಕಾರ

ನಂ.ಗ್ರಾಅಪ 77 ಗ್ರಾಪಂಸಿ 2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 12-04-2017.

## ಸುತ್ತೋಲೆ

ವಿಷಯ: ರಾಜ್ಯದಲ್ಲಿನ ಗ್ರಾಮ ಪಂಚಾಯತಿ ಸಿಬ್ಬಂದಿಗಳ ನೇಮಕಾತಿಗೆ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 22 ಗ್ರಾಪಂಸಿ 2014, ದಿನಾಂಕ: 10.09.2014.
2. ಸರ್ಕಾರದ ತಿದ್ದೋಲೆ ಸಂಖ್ಯೆ: ಗ್ರಾಅಪ 22 ಗ್ರಾಪಂಸಿ 2014 ದಿನಾಂಕ: 20-09-2014.
3. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 32 ಗ್ರಾಪಂಸಿ 2014 ದಿನಾಂಕ: 25-10-2014, 15-11-2014 ಮತ್ತು 12-02-2015.
4. ಸರ್ಕಾರದ ತಿದ್ದೋಲೆ ಸಂಖ್ಯೆ: ಗ್ರಾಅಪ 27 ಗ್ರಾಪಂಸಿ 2016 ದಿನಾಂಕ: 09-03-2016.
5. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 27 ಗ್ರಾಪಂಸಿ 2016 ದಿನಾಂಕ: 09-03-2016.
6. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 27 ಗ್ರಾಪಂಸಿ 2016 ದಿನಾಂಕ: 29-07-2016.
7. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 27 ಗ್ರಾಪಂಸಿ 2015 (ಭಾಗ), ದಿ:14-12-2016.

*****

1. ಉಲ್ಲೇಖ (1) ಮತ್ತು (2) ರ ಸರ್ಕಾರದ ಆದೇಶ ಮತ್ತು ತಿದ್ದೋಲೆಗಳಲ್ಲಿ ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ವರ್ಗದ ಮಾದರಿ (ಸ್ಟ್ಯಾಫಿಂಗ್ ಪ್ಯಾಟ್ರನ್) ಹಾಗೂ ಸಿಬ್ಬಂದಿಗಳ ನೇಮಕಾತಿ ವಿಧಾನದ ಬಗ್ಗೆ ಹಾಗೂ ಗ್ರಾಮ ಪಂಚಾಯತಿಗಳು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಪೂರ್ವಾನುಮೋದನೆ ಪಡೆಯದೆ ಈಗಾಗಲೇ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ಮತ್ತು 113 ರಂತೆ ನೇಮಕ ಮಾಡಿಕೊಂಡಿರುವ ಸಿಬ್ಬಂದಿಗಳಿಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅನುಮೋದನೆ ನೀಡುವ ಬಗ್ಗೆ ಸವಿವರವಾಗಿ ತಿಳಿಸಲಾಗಿದೆ.

2. ಉಲ್ಲೇಖ (3) ಮತ್ತು (6) ರ ಸರ್ಕಾರದ ಪತ್ರಗಳಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳ ನೇಮಕಾತಿಗೆ ಅನುಮೋದನೆ ನೀಡುವ ಬಗ್ಗೆ ಸವಿವರವಾಗಿ ಸ್ಪಷ್ಟೀಕರಣವನ್ನು ನೀಡಲಾಗಿದೆ. ಉಲ್ಲೇಖ (5) ರ ಸರ್ಕಾರದ ಪತ್ರದಲ್ಲಿ ಗ್ರಾಮ ಪಂಚಾಯತಿಗಳು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಪೂರ್ವಾನುಮೋದನೆ ಪಡೆಯದೆ ಈಗಾಗಲೇ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ಮತ್ತು 113 ರಂತೆ ನೇಮಕ ಮಾಡಿಕೊಂಡಿರುವ ಸಿಬ್ಬಂದಿಗಳಿಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅನುಮೋದನೆ ನೀಡುವ ಬಗ್ಗೆ ಉಲ್ಲೇಖ(7) ರ ಸರ್ಕಾರದ ಸುತ್ತೋಲೆಯಲ್ಲಿ ಸವಿವರವಾಗಿ ತಿಳಿಸಲಾಗಿದೆ.

3. ಆದಾಗ್ಯೂ ಕೆಲವು ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅರ್ಹರಿರುವ ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ನೇಮಕಾತಿಗೆ ಅನುಮೋದನೆ ನೀಡದಿರುವ ಬಗ್ಗೆ ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘದವರು ಆಗ್ಗಿಂದಾಗ್ಗೆ ಅನುಮೋದನೆ ನೀಡಲು ಕ್ರಮ ವಹಿಸುವಂತೆ ಸರ್ಕಾರವನ್ನು ಒತ್ತಾಯಿಸುತ್ತಿರುತ್ತಾರೆ. ಗ್ರಾಮ ಪಂಚಾಯತಿ ನೌಕರರ ನೇಮಕಾತಿಗೆ ಅನುಮೋದನೆ ನೀಡದಿರುವ ಬಗ್ಗೆ ಸರ್ಕಾರ ಗಂಭೀರವಾಗಿ ಪರಿಗಣಿಸಿದೆ.

4. ಮೇಲೆ ವಿವರಿಸಿರುವ ಸರ್ಕಾರದ ಆದೇಶಗಳು, ಸುತ್ತೋಲೆಗಳು, ತಿದ್ದೋಲೆಗಳು ಮತ್ತು ಪತ್ರಗಳಲ್ಲಿನ ನಿರ್ದೇಶನದ ಅನುಸಾರ ಗ್ರಾಮ ಪಂಚಾಯತಿಗಳು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಪೂರ್ವಾನುಮೋದನೆ ಪಡೆಯದೆ ಈಗಾಗಲೇ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ಮತ್ತು 113 ರಂತೆ ನೇಮಕ ಮಾಡಿಕೊಂಡಿರುವ ಸಿಬ್ಬಂದಿಗಳಿಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅನುಮೋದನೆ ನೀಡಲು ಬಾಕಿ ಇರುವ ಅರ್ಹ ಪ್ರಕರಣಗಳಿಗೆ ಅನುಮೋದನೆ ನೀಡಲು ಕಡ್ಡಾಯವಾಗಿ ಈ ಕೆಳಕಂಡಂತೆ ಕ್ರಮ ವಹಿಸುವಂತೆ ಸೂಚಿಸಿದೆ.

1) ಗ್ರಾಮ ಪಂಚಾಯಿತಿಗಳಲ್ಲಿ ಮಂಜೂರಾದ ಹುದ್ದೆಗಳಿಗನುಗುಣವಾಗಿ ನೇಮಕಾತಿ ಮಾಡಿಕೊಂಡಿದ್ದಲ್ಲಿ ಕೂಡಲೇ ಅನುಮೋದನೆ ನೀಡತಕ್ಕದ್ದು.
2) ದಿನಾಂಕ:09-03-2016 ರಲ್ಲಿನ ಪತ್ರದಲ್ಲಿ ವಿವರಿಸಿರುವಂತೆ ಬಿಲ್ ಕಲೆಕ್ಟರ್, ವಾಟರ್ ಮೆನ್/ಪಂಪ್ ಮೆಕ್ಯಾನಿಕ್/ಪಂಪ್ ಆಪರೇಟರ್ ಮತ್ತು ಸ್ವಚ್ಛತಾಗಾರರ ಹುದ್ದೆಗೆ ನೇಮಕಾತಿ ಮಾಡಿಕೊಂಡಿದ್ದಲ್ಲಿ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಅನುಮೋದನೆ ನೀಡತಕ್ಕದ್ದು.
3) ಕ್ಲರ್ಕ್ ಕಂ ಡಾಟಾ ಆಪರೇಟರ್ ವೃಂದದ ಹುದ್ದೆ ಖಾಲಿ ಇದ್ದು, ಸದರಿ ಹುದ್ದೆಗೆ ದಿನಾಂಕ: 10-09-2014ರ ಸರ್ಕಾರದ ಆದೇಶದಂತೆ ಮತ್ತು ಪತ್ರಗಳಲ್ಲಿನ ನಿರ್ದೇಶನದ ಅನುಸಾರ ಡಾಟಾ ಎಂಟ್ರಿ ಆಪರೇಟರ್ ವೃಂದದ ನೌಕರರನ್ನು ನೇಮಕಾತಿ ಮಾಡಿಕೊಂಡಿದ್ದಲ್ಲಿ ಅನುಮೋದನೆ ನೀಡತಕ್ಕದ್ದು.
4) ಅನುಮೋದನೆ ನೀಡಲು ಬಾಕಿ ಇರುವ ಅರ್ಹ ಪ್ರಕರಣಗಳನ್ನು ಪಟ್ಟಿ ಮಾಡಿ ಜೇಷ್ಠತೆ ಮತ್ತು ಅರ್ಹತೆಯ ಆಧಾರದ ಮೇಲೆ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ದಿನಾಂಕ: 31-03-2017 ರೊಳಗೆ ಸಂಬಂಧಿಸಿದ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸತಕ್ಕದ್ದು.
5) ಈ ರೀತಿ ಸ್ವೀಕರಿಸಿದ ಪ್ರಸ್ತಾವನೆಯನ್ನು ಸಂಬಂಧಿಸಿದ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಪರಿಶೀಲಿಸಿ ದಿನಾಂಕ:15-04-2017 ರೊಳಗೆ ಸಂಬಂಧಿಸಿದ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸತಕ್ಕದ್ದು.
6) ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಸ್ವೀಕೃತವಾದ ಪ್ರಸ್ತಾವನೆಗಳನ್ನು ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿಯವರು ಪರಿಶೀಲಿಸಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಅನುಮೋದನೆಗೆ ಸಲ್ಲಿಸತಕ್ಕದ್ದು. ಈ ರೀತಿ ಸ್ವೀಕರಿಸಿದ ಪ್ರಸ್ತಾವನೆಗಳಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ದಿನಾಂಕ:30-04-2017 ರೊಳಗೆ ಕಡ್ಡಾಯವಾಗಿ ಅನುಮೋದನೆ ನೀಡತಕ್ಕದ್ದು.

ಮೇಲ್ಕಂಡ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಉಪಕಾರ್ಯದರ್ಶಿಗಳು, ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಮತ್ತೊಮ್ಮೆ ತಿಳಿಸಿದೆ ಮತ್ತು ಕೈಗೊಂಡ ಕ್ರಮದ ಬಗ್ಗೆ ಸರ್ಕಾರಕ್ಕೆ ವರದಿ ಮಾಡಲು ತಿಳಿಸಿದೆ.

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಉಪಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತಿಗಳು.
3) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
4) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3) ಅಧ್ಯಕ್ಷರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಧಿಕಾರಿ/ನೌಕರರ ಸಂಘ (ರಿ), ಗಾಂಧಿನಗರ, ಬೆಂಗಳೂರು.
4) ಅಧ್ಯಕ್ಷರು, ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘ (ಸಿ.ಐ.ಟಿ.ಯು), ಸಂಪಂಗಿರಾಮನಗರ, ಬೆಂಗಳೂರು.
5) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.